# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರಳ ಸಾಮೂಹಿಕ ವಿವಾಹವನ್ನು ಜನಪ್ರಿಯಗೊಳಿಸಲು "ಆದರ್ಶ ವಿವಾಹ ಯೋಜನೆಯ" ಅನುಷ್ಠಾನಕ್ಕಾಗಿ ಪ್ರಾದೇಶಿಕ ಆಯುಕ್ತರುಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:** 1) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 81 ಎಂಎಸ್‌ಟಿ 07, ದಿನಾಂಕ:02/05/2008.
2) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 79 ಸಮಿತಿ 2008. ದಿನಾಂಕ:17/05/2008.
3) ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಇಪಿ 2008, ದಿನಾಂಕ:16/05/2008.
4) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 1 ಎಡಿಎಂ 2008, ದಿನಾಂಕ:23/04/2008.
5) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 5 ಎಡಿಎಂ 2008, ದಿನಾಂಕ:19/09/2008

## ಪ್ರಸ್ತಾವನೆ:

ಕರ್ನಾಟಕ ಸರ್ಕಾರವು ರಾಜ್ಯದಲ್ಲಿ ಸರಳ ಸಾಮೂಹಿಕ ವಿವಾಹವನ್ನು ಜನಪ್ರಿಯಗೊಳಿಸಲು ಆದರ್ಶ ವಿವಾಹ ಯೋಜನೆಯನ್ನು ಮೇಲೆ ಓದಲಾದ ಉಲ್ಲೇಖ 1 ರನ್ವಯ ರಾಜ್ಯದಲ್ಲಿ ಜಾರಿಗೆ ತಂದಿದ್ದು, ನಗರ ಪ್ರದೇಶಗಳಲ್ಲಿ ಕನಿಷ್ಟ 25 ಜೋಡಿಗಳು ಹಾಗೂ ಉಲ್ಲೇಖ 5 ರನ್ವಯ ಗ್ರಾಮಾಂತರ ಪ್ರದೇಶದಲ್ಲಿ ಕನಿಷ್ಟ 10 ಜೋಡಿಗಳ ವಿವಾಹಗಳು ನಡೆದಿರುವ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ವಿವಾಹವಾದವರು ಮಾತ್ರ ಈ ಯೋಜನೆಯ ಅನುಕೂಲ ಪಡೆಯಲು ಅರ್ಹತೆ ಹೊಂದಿರುತ್ತಾರೆ. ಈ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಲು 2009-10 ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 2250-00-800-2-17-059 (ಯೋಜನೆ) ರಲ್ಲಿ ರೂ. 1000 ಲಕ್ಷಗಳನ್ನು ಒದಗಿಸಲಾಗಿದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಮೊದಲ ಹಂತವಾಗಿ ರೂ.200 ಲಕ್ಷಗಳನ್ನು, ಮೇಲೆ ಓದಲಾದ ಉಲ್ಲೇಖ 4 ರನ್ವಯ ಪ್ರಾದೇಶಿಕ ಆಯುಕ್ತರಿಗೆ ಅನುದಾನ ಬಿಡುಗಡೆ ಮಾಡಿ ಅವರ ವ್ಯಾಪ್ತಿಯಲ್ಲಿ ಬರುವ ಜಿಲ್ಲಾಧಿಕಾರಿಗಳಿಗೆ ಅವಶ್ಯಕತೆಗೆ ಅನುಗುಣವಾಗಿ ಮರು ಹಂಚಿಕೆ ಮಾಡಲು ಆದೇಶಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 1 ಎಡಿಎಂ 2009, ಬೆಂಗಳೂರು. ದಿನಾಂಕ:29/04/2009.

ಸರಳ ಸಾಮೂಹಿಕ ವಿವಾಹಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಆದರ್ಶ ವಿವಾಹ ಯೋಜನೆಯಡಿ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಮದುವೆಯಾಗುವ ಪ್ರತಿಯೊಬ್ಬ ಯುವತಿಗೂ ರೂ.10,000 ಗಳ ಪ್ರೋತ್ಸಾಹ ಧನವನ್ನು 2 ವರ್ಷಗಳ ಅವಧಿಗೆ ಠೇವಣಿ ರೂಪದಲ್ಲಿ ಸರ್ಕಾರದ ವತಿಯಿಂದ ನೀಡಲಾಗುವುದು. ಈ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನ ಗೊಳಿಸಲು ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧ-1 ರಲ್ಲಿರುವಂತೆ ರೂ.200 ಲಕ್ಷಗಳನ್ನು (ಎರಡು ನೂರು ಲಕ್ಷಗಳು ಮಾತ್ರ) ಸಂಬಂಧಪಟ್ಟ ಪ್ರಾದೇಶಿಕ ಆಯುಕ್ತರುಗಳಿಗೆ ಬಿಡುಗಡೆ ಮಾಡುತ್ತಾ, ತಮ್ಮ ವ್ಯಾಪ್ತಿಯ ಜಿಲ್ಲಾಧಿಕಾರಿಗಳ ಬೇಡಿಕೆಯನ್ನು ಅನುಸರಿಸಿ ಅಗತ್ಯ ಅನುದಾನವನ್ನು ಮರು ಹಂಚಿಕೆ ಮಾಡಲು ಆದೇಶಿಸಿದೆ. ಈ ಯೋಜನೆಗೆ ತಗುಲುವ ವೆಚ್ಚವನ್ನು 2009-10 ನೇ ಆರ್ಥಿಕ ಸಾಲಿನ ಲೆಕ್ಕ ಶೀರ್ಷಿಕೆ 2250-00-800-2-17-059 ರ ಅಡಿಯಲ್ಲಿ ಒದಗಿಸಲಾದ ಅನುದಾನದಲ್ಲಿ ಭರಿಸತಕ್ಕದ್ದು. ಈ ಯೋಜನೆಯ ಉಸ್ತುವಾರಿಯನ್ನು ಪ್ರಾದೇಶಿಕ ಆಯುಕ್ತರು ಮಾಡತಕ್ಕದ್ದು.

ಮೇಲ್ಕಂಡಂತೆ ಮಂಜೂರಾದ ಮೊತ್ತವು ಆದರ್ಶ ವಿವಾಹ ಯೋಜನೆಯ ಅನುಷ್ಠಾನಕ್ಕಾಗಿ ಮಾತ್ರ ಉಪಯೋಗಿಸತಕ್ಕದ್ದು, ಎಲ್ಲಾ ಪ್ರಾದೇಶಿಕ ಆಯುಕ್ತರು ಈ ಯೋಜನೆ ಕುರಿತು ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ತಹಸೀಲ್ದಾರರ ಮೂಲಕ ವಿಸ್ತಾರವಾಗಿ ಪ್ರಚಾರ ನೀಡತಕ್ಕದ್ದು.

ಈ ಹಣವನ್ನು ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಗೆ ಯಾವುದೇ ಕಾರಣಕ್ಕೂ ಹಾಕಬಾರದು ಹಾಗೂ ಹಣವನ್ನು ಖಜಾನೆ ಇಲಾಖೆಯ ಮುಖಾಂತರವೇ ವಿನಿಯೋಗಿಸತಕ್ಕದ್ದು. ಪ್ರಾದೇಶಿಕ ಆಯುಕ್ತರು ಬಿಡುಗಡೆಯಾದ ಅನುದಾನದ ಆರ್ಥಿಕ ಹಾಗೂ ಭೌತಿಕ ಪ್ರಗತಿ ವರದಿಗಳನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ಮಾಹಿತಿಯನ್ನು ಪಡೆದು ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಬೆಂಗಳೂರು ಹಾಗೂ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಡಿ 1996, ದಿನಾಂಕ:10/07/1996 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಕಾತ್ಯಾಯಿನಿ ದೇವಿ)** 29/4/09
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ.

ಇವರಿಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

ಪ್ರತಿಯನ್ನು:

1) ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
4) ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ.
5) ಎಲ್ಲಾ ಜಿಲ್ಲಾಧಿಕಾರಿಗಳು.
6) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
7) ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
8) ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.

**<u>ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 1 ಎಡಿಎಂ 2009 ಕ್ಕೆ ಅನುಬಂಧ-1</u>**

| ಕ್ರ.ಸಂ | ಪ್ರಾದೇಶಿಕ ಆಯುಕ್ತರುಗಳ ಹೆಸರು | ಬಿಡುಗಡೆ ಮಾಡಲಾದ ಅನುದಾನದ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಪ್ರಾದೇಶಿಕ ಆಯುಕ್ತರು. ಬೆಂಗಳೂರು ವಿಭಾಗ | 50.00 |
| 2 | ಪ್ರಾದೇಶಿಕ ಆಯುಕ್ತರು. ಬೆಳಗಾಂ ವಿಭಾಗ | 50.00 |
| 3 | ಪ್ರಾದೇಶಿಕ ಆಯುಕ್ತರು. ಮೈಸೂರು ವಿಭಾಗ | 50.00 |
| 4 | ಪ್ರಾದೇಶಿಕ ಆಯುಕ್ತರು. ಗುಲ್ಬರ್ಗಾ ವಿಭಾಗ | 50.00 |

(ಎಸ್.ಕಾತ್ಯಾಯಿನಿ ದೇವಿ) 29/4/09

ಪೀಠಾಧಿಕಾರಿಗಳು,

ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ

ನಿರ್ದೇಶನಾಲಯ, ಕಂದಾಯ ಇಲಾಖೆ.